## ಪಾಠ ೬. ವ್ಯಾಘ್ರಗೀತೆ

**ಆ) ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ**

**೧. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರು ಏನೆಂದು ಯೋಚಿಸಿದರು?**

ಉ) ಮದಲಿಂಗ ಕಣಿವೆ ದಾಟಿ ಕಾಡುದಾರಿಯಲ್ಲಿ ಹೋಗಬೇಕು. ಸ್ವಲ್ಪ ದೊಡ್ಡ ಹೆಜ್ಜೆ ಹಾಕಿದರೆ ಊಟದ ಹೊತ್ತಿಗೆ ಊರು ಸೇರಿಕೊಳ್ಳಬಹುದು ಎಂದು ಯೋಚಿಸಿದರು. ಬೇಗ ಬೇಗ ನಡೆದರೂ ಕಣಿವೆಗೆ ಬರುವ ವೇಳೆಗೆ ರಾತ್ರಿ ಕತ್ತಲಾಗಿತ್ತು. ಹಸಿವಿನ ಜೊತೆ ಭಯವು ಸೇರಿತ್ತು.

**೨. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು?**

ಉ) ಭರತಖಂಡದ ಹುಲಿಗಳು ಹಿಂದಿನಿಂದ ಹಾರಿ ಕೊಲ್ಲುವುದಿಲ್ಲ. ಶತ್ರುವನ್ನಾದರೂ ಸರಿಯೆ, ಆತ ಬೆನ್ನ ತಿರುಗಿಸಿರುವಾಗ ಕೊಲ್ಲುವುದು ಧರ್ಮವಲ್ಲ. ಆದ್ದರಿಂದ ಹುಲಿಯು ಶಾನುಭೋಗರ ಬೆನ್ನ ಹಿಂದಿನಿಂದ ಹಾರಿ ಕೊಲ್ಲಲಿಲ್ಲ.

**೩. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಗಳನ್ನು ವಿವರಿಸಿ**

ಉ) ಶಾನುಭೋಗರು ಮೂರ್ಛೆಹೋದ ಸಮಯಕ್ಕೆ ಸರಿಯಾಗಿ ಚಿಕ್ಕನಾಯಕನ ಹಳ್ಳಿ ಕಡೆಯಿಂದ ರೈತರ ಗಾಡಿ ಬರುತ್ತಿತ್ತು. ಅವರು ತೆಂಗಿನಕಾಯಿ ತುಂಬಿಕೊಂಡು ಹೋಗಿದ್ದರು. ಮರಳಿ ಬರುವಾಗ ಆ ದಾರಿಯಲ್ಲಿ ಹುಲಿಯ ಇರುವಿಕೆಯಿಂದಾಗಿ ಎತ್ತುಗಳು ಭಯದಿಂದ ಮುಂದೆ ಹೋಗಲಿಲ್ಲ. ಹುಲಿಯ ಗರ್ಜನೆ ಕೇಳಿಸಿತು. ಎತ್ತುಗಳ ಗಂಟೆಯ ಸದ್ದನ್ನು ಕೇಳಿದ ಹುಲಿಯು ಕೆಲವು ನಿಮಿಷ ತಡೆದು ರೈತರ ಮಾತು ಕೇಳಿಬಂದ ಮೇಲೆ ನಿರಾಶೆಯಿಂದ ಪಲಾಯನ ಮಾಡಿತು. ಆನಂತರ ರೈತರು ತಮ್ಮಲ್ಲಿದ್ದ ಕೋವಿಯಿಂದ ಒಂದೆರಡು ತೋಟಾ ಹಾರಿಸಿ, ಸಾಧ್ಯವಾದಷ್ಟು ಗಲಭೆ ಮಾಡುತ್ತಾ ತೆಂಗಿನ ಗರಿಯ ಪಂಜು ಹೊತ್ತಿಸಿಕೊಂಡು ಜಾಗರೂಕತೆಯಿಂದ ಮುಂದೆ ಬಂದರು. ಶಾನುಭೋಗರು ಪ್ರಜ್ಞೆ ತಪ್ಪಿ ಬಿದ್ದಿದ್ದನ್ನು ಕಂಡು ಮುಖದ ಮೇಲೆ ನೀರೆರಚಿ ಎಚ್ಚರಿಸಿದರು.

**ಇ) ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧) ಮೂರ್ತಿರಾಯರ ದೃಷ್ಟಿಯಲ್ಲಿ ಹುಲಿಯು ಬೇಟೆಯಾಡುವ ಬಗೆಯನ್ನು ವಿವರಿಸಿ**

**ಉ)** "ಶಾಕಾಹಾರವನ್ನು ತಿಂದು ಬದುಕಬಹುದಾದ ಮಾನವನೇ ಮಾಂಸವನ್ನು ತಿನ್ನಬಹುದಾದರೆ ಆಹಾರಕ್ಕಾಗಿ ಹುಲಿಯು ಪ್ರಾಣಿಗಳನ್ನು ಕೊಂದು ತಿನ್ನುವುದರಲ್ಲಿ ತಪ್ಪಿಲ್ಲ. ಆದರೆ ಕೊಲ್ಲುವಾಗ ಯಾವುದಾದರೂ ಒಂದು ಧರ್ಮವನ್ನು ಅನುಸರಿಸಿ ಕೊಲ್ಲುವುದೋ ಅಥವಾ ಧರ್ಮಾಧರ್ಮಗಳ ಲೆಕ್ಕ ಇಡದೆ ಸ್ವಚ್ಛಂದದಿಂದ ವರ್ತಿಸುತ್ತದೆಯೇ ಎಂಬುವುದೇ ಮುಖ್ಯ ಪ್ರಶ್ನೆ. ಇತರ ದೇಶಗಳಲ್ಲಿ ಇರುವ ಹುಲಿಗಳ ವಿಷಯ ಹೇಗೋ ಗೊತ್ತಿಲ್ಲ ಆದರೆ ಯಾವ ನಾಡಿನಲ್ಲಿ ಶ್ರೀರಾಮನಂಥ ದೊರೆಗಳು ಆಳಿದರೋ, ಭಗವದ್ಗೀತೆಯಂಥ ಗ್ರಂಥ ಉದ್ಭವಿಸಿತೋ, ಅಂತಹ ಭರತ ಭೂಮಿಯಲ್ಲಿ ಹುಲಿಗಳು ಅಧರ್ಮಕ್ಕೆ ಅವಕಾಶ ಮಾಡಿಕೊಡುವುದಿಲ್ಲ. ಭರತಖಂಡದ ಹುಲಿಗಳು ಯಾರನ್ನೇ ಆಗಲಿ, ಶತ್ರವನ್ನಾದರೂ ಸರಿ ಹಿಂದಿನಿಂದ ಹಾರಿ ಕೊಲ್ಲುವುದಿಲ್ಲ, ಬೆನ್ನು ತಿರುಗಿಸಿರುವಾಗ ಕೊಲ್ಲುವುದು ಧರ್ಮವಲ್ಲ. ಭಗವದ್ಗೀತೆಯ **'ಸ್ವಧರ್ಮೇ ನಿಧನಂ ಶ್ರೇಯಃ'** ಎಂಬ ಮಾತಿನಂತೆ ಹುಲಿಗಳು ಧರ್ಮಪರತೆಯಿಂದ ಬೇಟೆಯಾಡುತ್ತವೆ." ಎಂಬುವುದು ಮೂರ್ತಿರಾಯರು ಅಭಿಪ್ರಾಯಪಡುತ್ತಾರೆ.

**೨) ಶಾನುಭೋಗರನ್ನು ರಕ್ಷಿಸಿದುದು ಖರ್ದಿ ಪುಸ್ತಕವೇ? ಹುಲಿಯ ಧರ್ಮವೇ? ಸಮರ್ಥನೆಯೊಂದಿಗೆ ವಿವರಿಸಿ**

ಉ) ಹುಲಿಗಳು ಹಿಂದಿನಿಂದ ಮೇಲೆ ಬೀಳುವುದಿಲ್ಲವೆಂದು ಅರಿತಿದ್ದ ಶಾನುಭೋಗರು ಉಪಾಯವಾಗಿ ಹುಲಿಗೆ ಬೆನ್ನು ತಿರುಗಿಸಿ ನಡೆದು ನಡೆದು ದಣಿದರು. ಆವಿಪತ್ತಿನ ಸನ್ನಿವೇಶದಲ್ಲಿ ಅವರಿಗೆ ನೆನಪಾಗಿದ್ದು ಅವರ ಬಳಿಯಿದ್ದ ಖರ್ದಿ ಪುಸ್ತಕ. ಅದು ಸಧ್ಯಕ್ಕೆ ಅವರ ಬಳಿಯಿದ್ದ ಬ್ರಹ್ಮಾಸ್ತ್ರ. ಆದ್ದರಿಂದ ಅದು ಹುಲಿಯ ಮುಖಕ್ಕೆ ಬಡಿದಾಗ ಏನಾಯಿತು? ಎಂದು ಅರಿಯಲು ಹುಲಿಗೆ ಅರೆನಿಮಿಷ ಹಿಡಿಯಿತು. ಅದನ್ನೇ ಉಪಯೋಗಿಸಿಕೊಂಡು ಓಡಿದ ಅವರು ಎಡವಿ ಬಿದ್ದು ಮೂರ್ಛೆ ಹೋದರು. ಅಷ್ಟರಲ್ಲಿ ಅಲ್ಲಿಗೆ ಬರುತ್ತಿದ್ದ ರೈತರ ಶಬ್ದ ಕೇಳಿ ಹುಲಿ ಪಲಾಯನ ಮಾಡಿತು. ಅವರಿಗೆ ಆ ಅರೆನಿಮಿಷದ ಅವಕಾಶವನ್ನು ಒದಗಿಸಿಕೊಟ್ಟು ಪ್ರಾಣವನ್ನು ಕಾಪಾಡಿದ ಖರ್ದಿ ಪುಸ್ತಕದ ಮೇಲೆ ಅವರಿಗೆ ಕೃತಜ್ಞತಾ ಭಾವವಿದೆ. ಖರ್ದಿ ಪುಸ್ತಕವೇ ತಮ್ಮ ಜೀವ ಉಳಿಸಿತು ಎಂಬುವುದು ಅವರ ನಂಬಿಕೆ ಆದರೆ ನಿಜವಾಗಿ ನೋಡಿದರೆ ಶಾನುಭೋಗರು ಉಳಿದದ್ದು ಖರ್ದಿ ಪುಸ್ತಕದಿಂದಲ್ಲ, ಹುಲಿಯ ಧರ್ಮಶ್ರದ್ಧೆಯಿಂದ. ಏಕೆಂದರೆ ಭರತಖಂಡದ ಹುಲಿಗಳು ಹಿಂದಿನಿಂದ ದಾಳಿ ಮಾಡಿ ಕೊಲ್ಲದಿರುವದು ಧರ್ಮಶ್ರದ್ಧೆಯ ಗುಣ. ಮನಸ್ಸು ಮಾಡಿದ್ದರೆ ಹುಲಿ ಯಾವಾಗಲೋ ಶಾನುಭೋಗರನ್ನು ಕೊಲ್ಲಬಹುದಿತ್ತು. ಆದರೆ ಹುಲಿಯ ಶ್ರದ್ಧೆಯೇ ಶಾನುಭೋಗರು ಹುಲಿಯಿಂದ ಪಾರಾಗಲು ಕಾರಣವಾಯಿತು ಎಂದು ಹೇಳಬಹುದು.

**ಈ) ಸಂದರ್ಭದೊಂದಿಗೆ ಸ್ವಾರಸ್ಯವನ್ನು ಬರೆಯಿರಿ**

**೧. "ಖಂಡವಿದೆಕೋ, ಮಾಂಸವಿದೆಕೋ, ಗುಂಡಿಗೆಯ ಬಿಸಿರಕ್ತವಿದೆಕೋ"**

ಈ ವಾಕ್ಯವನ್ನು ಎ. ಎನ್ *ಮೂರ್ತಿರಾವ್* ಅವರು ಬರೆದಿರುವ **'ವ್ಯಾಘ್ರಗೀತೆ'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಮದಲಿಂಗನ ಕಣಿವೆಯ ಕಾಲುದಾರಿಯಲ್ಲಿ ಶಾನುಭೋಗರ ಬೆನ್ನು ಹಿಂದೆ ಬಂದ ಹುಲಿಯು 'ವೈರಿಯಾದರೂ ಸರಿಯೇ ಹಿಂದಿನಿಂದ ಹಾರಿ ಕೊಲ್ಲಬಾರದು' ಎಂಬ ತನ್ನ ಧರ್ಮವನ್ನು ನೆನೆದು, ಗೊಂದಲದಲ್ಲಿ ಇದ್ದ ಸಂದರ್ಭದಲ್ಲಿ ಪುಣ್ಯಕೋಟಿಯ ಈ ಮಾತನ್ನು ಲೇಖಕರು ನೆನಪಿಸಿಕೊಳ್ಳುತ್ತಾರೆ.

**ಸ್ವಾರಸ್ಯ:** ತನ್ನನ್ನು ತಿನ್ನಲು ಆಹ್ವಾನ ಕೊಟ್ಟಾಗಲೂ ಹುಲಿರಾಯ ಸತ್ಯವ್ರತೆಯಾದ ಪುಣ್ಯಕೋಟಿಯನ್ನು ತಿನ್ನದೆ ಪ್ರಾಣಬಿಟ್ಟು, ತನ್ನ ಆದರ್ಶವನ್ನು ಹಾಗೂ ಧರ್ಮಶ್ರದ್ಧೆಯನ್ನು ಮೆರೆಯಿತು ಎಂಬುವುದನ್ನು ಈ ವಾಕ್ಯದಲ್ಲಿ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತವಾಗಿದೆ.

೨. **"ಸ್ವಧರ್ಮ ನಿಧನಂ ಶ್ರೇಯಃ"**

ಈ ವಾಕ್ಯವನ್ನು *ಎ. ಎನ್ ಮೂರ್ತಿರಾವ್* ಅವರು ಬರೆದಿರುವ **'ವ್ಯಾಘ್ರಗೀತೆ'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಮದಲಿಂಗನ ಕಣಿವೆಯ ಕಾಲುದಾರಿಯಲ್ಲಿ ಶಾನುಭೋಗರ ಬೆನ್ನು ಹಿಂದೆ ಬಂದ ಹುಲಿಯು 'ವೈರಿಯಾದರೂ ಸರಿಯೇ ಹಿಂದಿನಿಂದ ಹಾರಿ ಕೊಲ್ಲಬಾರದು' ಎಂಬ ತನ್ನ ಧರ್ಮವನ್ನು ನೆನೆದು, ಗೊಂದಲದಲ್ಲಿ ಇದ್ದ ಸಂದರ್ಭದಲ್ಲಿ ಹುಲಿಗೆ ಭಗವದ್ಗೀತೆಯ ಈ ಮಾತು ನೆನಪಿಗೆ ಬಂದಿತು.

**ಸ್ವಾರಸ್ಯ:** ಸದ್ವಂಶದಲ್ಲಿ ಜನಿಸಿದ ಹುಲಿಯು ಶಾನುಭೊಗರ ಬೆನ್ನ ಹಿಂದಿನಿಂದ ಆಕ್ರಮಣ ಮಾಡದೆ ಭಗವದ್ಗೀತೆ ಈ ಮಾತನ್ನು ನೆನೆಯುವುದು ಸ್ವಾರಸ್ಯಪೂರ್ಣವಾಗಿದೆ.

೩. **"ದೇವರೆ, ಮರ ಹತ್ತುವಷ್ಟು ಅವಕಾಶ ಕರುಣಿಸು"**

ಈ ವಾಕ್ಯವನ್ನು *ಎ. ಎನ್ ಮೂರ್ತಿರಾವ್* ಅವರು ಬರೆದಿರುವ **'ವ್ಯಾಘ್ರಗೀತೆ'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಮದಲಿಂಗನ ಕಣಿವೆಯ ದಾರಿಯಲ್ಲಿ ಹುಲಿಯ ಆಕ್ರಮಣದಿಂದ ತಪ್ಪಿಸಿಕೊಳ್ಳಲು ಶಾನುಭೋಗರು ಖಿರ್ದಿಪುಸ್ತಕವನ್ನು ಹುಲಿಯ ಮುಖದ ಮೇಲೆ ಎಸೆದು, ಮರದ ಕಡೆಗೆ ಓಡಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ:** 'ಸಂಕಟ ಬಂದಾಗ ವೆಂಕಟರಮಣ' ಎಂಬಂತೆ ಶಾನುಭೋಗರು ಹುಲಿಯಿಂದ ತಪ್ಪಿಸಿಕೊಳ್ಳಲು ಅವಕಾಶ ಮಾಡಿಕೊಡು ಎಂದು ದೇವರನ್ನು ಪ್ರಾರ್ಥಿಸುವುದು ಬಹು ಸ್ವಾರಸ್ಯಪೂರ್ಣವಾಗಿದೆ.

೪. **"ನಾನು ಮುಖ ಮೇಲಾಗಿ ಬಿದ್ದಿದ್ದೆನೆ?"**

ಈ ವಾಕ್ಯವನ್ನು *ಎ. ಎನ್ ಮೂರ್ತಿರಾವ್* ಅವರು ಬರೆದಿರುವ **'ವ್ಯಾಘ್ರಗೀತೆ'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಶಾನುಭೋಗರು ಹುಲಿಯ ಆಕ್ರಮಣದಿಂದ ಹೆದರಿ, ಮರ ಹತ್ತಲು ಓಡುವಾಗ ಕಲ್ಲನ್ನು ಎಡವಿ ಬಿದ್ದು, ಪ್ರಜ್ಞೆ ತಪ್ಪಿದಾಗ, ಅದೇ ದಾರಿಯಲ್ಲಿ ಹೋಗುತ್ತಿದ್ದ ರಯತರು ಅವರ ಮುಖದ ಮೇಲೆ ನೀರೆರೆಚಿ ಎಚ್ಚರಿಸಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ:** "ನಾನು ಪ್ರಜ್ಞೆ ತಪ್ಪಿ ಬಿದ್ದಿದ್ದಾಗ ಹುಲಿಯು ಏಕೆ ಎಳೆದುಕೊಂಡು ಹೋಗಲಿಲ್ಲ?" ಎಂಬ ಸಮಸ್ಯೆಗೆ ಶಾನುಭೋಗರು ಈ ಪ್ರಶ್ನೆಯ ಮೂಲಕ ಉತ್ತರ ಕಂಡುಕೊಳ್ಳುವುದು ಇಲ್ಲಿಯ ಸ್ವಾರಸ್ಯವಾಗಿದೆ.

೫. **"ಹುಲಿ ಈಗ ಎಷ್ಟು ಹಸಿದಿರಬೇಕು"**

ಈ ವಾಕ್ಯವನ್ನು *ಎ. ಎನ್ ಮೂರ್ತಿರಾವ್* ಅವರು ಬರೆದಿರುವ **'ವ್ಯಾಘ್ರಗೀತೆ'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಮದಲಿಂಗನ ಕಣಿವೆಯ ದಾರಿಯಲ್ಲಿ ಹುಲಿಯ ಆಕ್ರಮಣದಿಂದ ತಪ್ಪಿಸಿಕೊಂಡ ಶಾನುಭೋಗರು ಜೀವ ಸಹಿತ ಮನೆಗೆ ಬಂದು ರಸದೂಟವನ್ನು ಮಾಡಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ:** ನಾನು ಹುಲಿಯಿಂದ ತಪ್ಪಿಸಿಕೊಂಡು ಬಂದು ರಸದೂಟ ಮಾಡುತ್ತಿದ್ದೇನೆ ಆದರೆ ನನ್ನನ್ನು ಕೊಲ್ಲಲು ಬಂದ ಹುಲಿಯು ಕೊಲ್ಲಲಾಗದೆ ಹಸಿವಿನಿಂದ ಬಳಲುತ್ತಿರಬಹುದು ಎಂದು ಶಾನುಭೋಗರು ಹೇಳುವುದು ಸ್ವಾರಸ್ಯಪೂರ್ಣವಾಗಿದೆ.